**(ಮಧ್ಯಂತರ ಅರ್ಜಿ ನಂ. 6 ಮತ್ತು 7 ರ ಮೇಲೆ ಆದ ಆದೇಶದ ಮೇರೆಗೆ ಇಂದು ದಿನಾಂಕ 25-07-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು)**

**ಪಾಟೀಸವಾಲುಃ 2 ನೇ ಎದುರುದಾರರ ಪರ ಶ್ರೀಮತಿ ವಿ ಓ ಕೆ ವಕೀಲರಿಂದ**

2013 ರಿಂದ ಧಾರವಾಡ ಪಶು ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದೇನೆ. ಪ್ರಾಣಿಗಳಿಗೆ ಅಪಘಾತವಾಗಿ ಮೃತಪಟ್ಟರೆ ಅಥವಾ ಬೇರೆ ಕಾರಣದಿಂದ ಮೃತ ಪಟ್ಟರೆ ಅವುಗಳ ಮರಣೋತ್ತರ ಪರೀಕ್ಷೆ ಮಾಡುತ್ತೇನೆ. ಪ್ರಾಣಿಗಳ ಪರೀಕ್ಷೆ ಮಾಡಿದ ನಂತರ ಅವುಗಳ ಮೌಲ್ಯವನ್ನು ಸಹಿತ ನಿರ್ಧರಿಸುವ ಅಧಿಕಾರ ಇದೆ. ಪ್ರಾಣಿಗಳ ಮೌಲ್ಯವನ್ನು ನಿರ್ಧರಿಸುವ ಅಧಿಕಾರ ಪಶು ಮತ್ತು ಸಂಗೋಪನಾ ಇಲಾಖೆಯ ಉಪನಿರ್ದೇಶಕರಿಗೆ ಇದೆ ನನಗಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರ ಕೋರಿಕೆಯ ಮೇರೆಗೆ ಆತನ ಮೃತ ಪಟ್ಟ 18 ಕುರಿಗಳ ಮೌಲ್ಯವನ್ನು ನಿರ್ಧಾರ ಮಾಡಿದ್ದೇನೆ. ಈ ಪ್ರಕರಣದಲ್ಲಿ ಸತ್ತಿರುವ ಕುರಿಗಳು, ಮೇಕೆಗಳು ಎಷ್ಟು ಅವುಗಳ ವಯಸ್ಸು ಎಷ್ಟು ಎಂಬುದು ನನಗೆ ಗೊತ್ತಿಲ್ಲ. ಈ ಪ್ರಕರಣದಲ್ಲಿ ಸತ್ತಿರುವ ಪ್ರಾಣಿಗಳನ್ನು ನಾನು ನೋಡಿಲ್ಲ.

ಅರ್ಜಿದಾರರ ಕೋರೆಯ ಮೇರೆಗೆ ಆ ಪ್ರಾಣಿಗಳ ಮೌಲ್ಯವನ್ನು ನಿರ್ಧಾರ ಮಾಡಿದ್ದೇನೆ ಎಂದರೆ ಸರಿಯಲ್ಲ. ಕುರಿ ಮತ್ತು ಮೇಕೆಗಳ ಮೌಲ್ಯ ಅವುಗಳ ವಯಸ್ಸಿನ ಆಧಾರದ ಮೇಲೆ ನಿರ್ಧಾರ ಆಗುತ್ತದೆ ಎಂದರೆ ಸರಿ. ಅರ್ಜಿದಾರರು ಮೌಖಿಕವಾಗಿ ಕೋರಿದ್ದರು ಯಾವುದೇ ರೀತಿಯ ದಾಖಲೆ ನೀಡಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ

ಅರ್ಜಿದಾರರರಿಗೆ ಪೂರಕವಾಗುವಂತೆ ಸಾಕ್ಷಿ ಬರೆದಿದ್ದೇನೆ ಎಂದರೆ ಸರಿಯಲ್ಲ. ಪೊಲೀಸರಿಂದ ಅಪಘಾತದಲ್ಲಿ ಮೃತಪಟ್ಟ ಪ್ರಾಣಿಗಳ ಬಗ್ಗೆ ಮಾಹಿತಿ ಬಂದಾಗ ಪ್ರತಿಯೊಂದು ಪ್ರಾಣಿಯ ಮರಣೋತ್ತರ ಪರೀಕ್ಷೆ ಮಾಡುತ್ತೇನೆ. ಈ ರೀತಿ ಪ್ರತ್ಯೇಕವಾಗಿ ಪ್ರತಿಯೊಂದು ಪ್ರಾಣಿಯ ಮರಣೋತ್ತರ ಪರೀಕ್ಷೆ ಮಾಡಿದ ನಂತರ ಅವುಗಳ ಮೌಲ್ಯ ಗೊತ್ತಾಗುತ್ತದೆ ಎಂದರೆ ಸರಿ. ಒಂದು ಕುರಿಗೆ ಮೌಲ್ಯ ರೂ.20,000/- ಆಗುತ್ತದೆ ಅಂತಾ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ .**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ ,

ಪ್ರ ಹಿ ದಿ ನ್ಯಾ ಹಾಗೂ ಸಿಜೆಎಂ, ಧಾರವಾಡ.